ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ದೂರವಾಣಿ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/47/ಸುತ್ತೋಲೆ/2016-17

ದಿನಾಂಕ: 09/01/2017

# ಸುತ್ತೋಲೆ

ವಿಷಯ: ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಅನಾಹುತ ಹಾಗೂ ಅಗ್ನಿದುರಂತದ ಕುರಿತು ತರಬೇತಿಯನ್ನು ನೀಡುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಪತ್ರ ಸಂಖ್ಯೆ:ಇಡಿ 204 ಯುಜಿಹೆಚ್ 2016 ದಿ:05.12.2016.
2. ಸರ್ಕಾರದ ಪತ್ರ ಸಂಖ್ಯೆ: ಇಡಿ 167 ಅಅವಿ 2016 ದಿ:17.12.2016.

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಪತ್ರಗಳಲ್ಲಿ ಇಲಾಖೆಯ ವ್ಯಾಪ್ತಿಗೊಳಪಡುವ ಕಾಲೇಜುಗಳಲ್ಲಿನ ವಿದ್ಯಾರ್ಥಿಗಳಿಗೆ ಅನಾಹುತಗಳು, ಅಗ್ನಿ ದುರಂತದ ಹಾಗೂ ತುರ್ತು ಪರಿಸ್ಥಿತಿಗಳಲ್ಲಿ ಕೈಗೊಳ್ಳಬೇಕಾದ ಕ್ರಮದ ಕುರಿತು ಅರಿವನ್ನು ಮೂಡಿಸಲು ಪ್ರದರ್ಶನಗಳನ್ನು ಹಾಗೂ ಈ ಕುರಿತು ಚಿತ್ರಗಳನ್ನು ಪ್ರದರ್ಶಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ.

ಈ ಸಂಬಂಧ, ಇಲಾಖಾ ವ್ಯಾಪ್ತಿಯ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ತಮ್ಮ ಕಾಲೇಜಿಗೆ ಸಂಬಂಧಿಸಿದಂತೆ, ಜಿಲ್ಲಾ / ತಾಲ್ಲೂಕು ಕೇಂದ್ರಗಳಲ್ಲಿರುವ ಅಗ್ನಿಶಾಮಕ ಹಾಗೂ ತುರ್ತುಸೇವೆಗಳ ಠಾಣೆ / ಕಛೇರಿಗಳನ್ನು ಖುದ್ದಾಗಿ ಸಂಪರ್ಕಿಸಿ, ಅಲ್ಲಿನ ಅಧಿಕಾರಿಗಳೊಂದಿಗೆ ಸಮಾಲೋಚಿಸಿ ಕಾಲೇಜುಗಳಲ್ಲಿ ಅಗ್ನದುರಂತ / ತುರ್ತುಪರಿಸ್ಥಿತಿಗಳಲ್ಲಿ ವಿದ್ಯಾರ್ಥಿಗಳು / ಸಿಬ್ಬಂದಿಗಳು ಕೈಗೊಳ್ಳಬೇಕಾದ ಕ್ರಮದ ಕುರಿತು ಅರಿವನ್ನು ಮೂಡಿಸಲು ಪ್ರದರ್ಶನಗಳನ್ನು ಹಾಗೂ ಚಿತ್ರಗಳನ್ನು ಪ್ರದರ್ಶಿಸಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವಂತೆ ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ – ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ/ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ರವಾನಿಸಲು ಸೂಚಿಸಲಾಗಿದೆ.
2. ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಪ್ರಾದೇಶಿಕ ಜಂಟಿ ನಿರ್ದೇಶಕರ ಮುಖಾಂತರ) – ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

ಪ್ರತಿಯನ್ನು:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001.
2. ಕಛೇರಿ ಪ್ರತಿ.